# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 20-ಗಂಗಾನಗರ, ಬೆಂಗಳೂರು.

ಸಂಖ್ಯೆ: ಸ.ಅ/ವಾ-20/ಪಿ.ಆರ್/10/2020-21 ದಿನಾಂಕ:24-02-2021.

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಐ12(5)ಪಿ.ಆರ್/35/20-21 ದಿನಾಂಕ: 05-12-2020. ರವರ ಆದೇಶದಂತೆ ದಿನಾಂಕ: 20-02-2021 ರಂದು 09.30 ಗಂಟೆಗೆ ಬೆಳಗ್ಗೆ ವಾರ್ಡ್ ನಂ:20 ಗಂಗಾನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಶ್ರೀ ಬಿ.ಎಸ್ ಪ್ರಹಲಾದ್ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ರಾಮ್‌ರಾವ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ.20 |
| 03 | ಕೆ.ಎನ್ ಮಂಜುನಾಥ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) |
| 04 | ಶ್ರೀನಿವಾಸ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾಡ್ ನಂ: 20, ಸದಸ್ಯರು |
| 05 | ಸುವರ್ಣ ದೇವಿ | ಕಿರಿಯ ಅಭಿಯಂತರರು (ಬಿಡ್ಬ್ಲ್ಯೂಎಸ್ಎಸ್‌ಬಿ) |
| 06 | ಪ್ರಶಾದ್ | ಸಾರ್ವಜನಿಕರು |
| 07 | ರವಿ.ಆರ್ | ಸಾರ್ವಜನಿಕರು |
| 08 | ಬಸವರಾಜ್ | ಸಾರ್ವಜನಿಕರು |
| 09 | ವಿ.ಎಸ್. ಕೇಸವಮೂರ್ತಿ | ಸಾರ್ವಜನಿಕರು |
| 10 | ಸುಮ ಶ್ರೀಧರ್ | ಸಾರ್ವಜನಿಕರು |
| 11 | ವಿಜಯ ಗೌಡ | ಸಾರ್ವಜನಿಕರು |
| 12 | ಶ್ರೀನಿವಾಸ | ಸಾರ್ವಜನಿಕರು |
| 13 | ವೀನಾ | ಸಾರ್ವಜನಿಕರು |
| 14 | ಆರ್ ಇಂದ್ರಾನಿ | ಸಾರ್ವಜನಿಕರು |
| 15 | ಎಂ.ಟಿ ಜನಾರ್ಧನ್ | ಸಾರ್ವಜನಿಕರು |
| 16 | ಎಂ ನಾಗರಾಜ್ | ಸಾರ್ವಜನಿಕರು |
| 17 | ಮೆಹಬೂಬ್ | ಸಾರ್ವಜನಿಕರು |
| 18 | ಎ.ಟಿ.ಕೆ ಮೂರ್ತಿ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ. ಬಿ.ಎಸ್ ಪ್ರಹಲಾದ್ ಮತ್ತು ಕಾರ್ಯದರ್ಶಿಗಳಾದ ಶ್ರೀ ರಾಮ್‌ರಾವ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ: 20 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ವಾರ್ಡ್ ವ್ಯಾಪ್ತಿಯ ಅಗತ್ಯವಾದ ಪ್ರದೇಶಗಳನ್ನು ವಾರ್ಡ್ ಸಹಾಯಕ ಅಭಿಯಂತರರು ಗುರುತಿಸಿ ಸಿಸಿಟಿವಿ ಕ್ಯಾಮೆರಗಳನ್ನು ಅಳವಡಿಸಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು..
- ಗಂಗಮ್ಮ ಚಿಕನ್ ಅಂಗಡಿ 6ನೇ ಅಡ್ಡ ರಸ್ತೆಯಲ್ಲಿ ಒಂದು ಹೊಸ ಗೇಟ್ ಅಳವಡಿಸಲು ಕಾಮಗಾರಿ ಇಲಾಖೆಗೆ ಸೂಚಿಸಲಾಯಿತು.

- ವಾರ್ಡ್ ಪಿಲ್ಲಪ್ಪ ಬ್ಲಾಕ್‌ನ ವ್ಯಾಪತಿಯಲ್ಲಿ ಗೇಟ್ ಅಳವಡಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
- ಸಾಯಿ ಬಾಬ ರಸ್ತ ದುರಸ್ಥಿಯನ್ನು ಸರಿಪಡಿಸುವ ಬಗ್ಗೆ ಕ್ರಮ ವಹಿಸುವಂತೆ ಸೂಚಿಸಲಾಯಿತು.
- ವಾರ್ಡ್ ವ್ಯಾಪತಿಯಲ್ಲಿ ಕಸ ವಿಲೇವಾರಿ ಮಾಡದಿರುವು ಸಾರ್ವಜನಿಕರುಗಳಿಗೆ ದಂಡ ವಿದಿಸುವಂತೆ ಸೂಚಿಸಲಾಯಿತು.
- ಬೆಸ್ಕಾಂ ರವರು ವಿದ್ಯುತ್ ಕಂಬ್ಬಿಗೆ ತಗಲುವ ಮರದ ಕೊಂಬೆಗಳನ್ನು ಕಡಿತಗೊಳಿಸಿ ತಾವೆ ಸ್ವಚ್ಛಗೊಳಸುವಂತೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿ ಪಾರ್ಕ್ ನಿರ್ವಹಣೆ ಮಾಡದಿರುವ ಬಗ್ಗೆ ಚರ್ಚಿಸಲಾಗಿ ನಿರ್ವಹಣೆಯ ಬಗ್ಗೆ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿಲ್ಲಿಸಿರುವ ವಾಹನಗಳನ್ನು ತೆರವುಗೊಳಿಸಿ ಸದರಿ ಸ್ಥಳಗಳಲ್ಲಿ ನೋ ಪಾರ್ಕಿಗ್ ನಾಮಪಲಕವನ್ನು ಅಳವಡಿಸಲು ಪೋಲಿಸಿ ಸಿಂಬ್ಬಂದಿಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಒಳಚರಂಡಿಯನ್ನು ಸ್ವಚ್ಛಗೊಳಿಸುವಂತೆ ಸಭೆಗೆ ಹಾಜರಿದ್ದ ವಾರ್ಡ್ ಸದಸ್ಯರುಗಳು ದೂರು ನೀಡಿರುವ ಮೇರೆಗೆ ಸದರಿ ಪ್ರದೇಶವನ್ನು ಗುರುತಿಸಿ ಈ ಕೂಡಲೇ ಕ್ರಮ ವಹಿಸುವಂತೆ ಸೂಚಿಸಲಾಯಿತು..
- ವಾರ್ಡ್ ವ್ಯಾಪ್ತಿಯ ವಿವರ್ಸ್ ಕಾಲೋನಿಯಲ್ಲಿ ಹಳೆ ಕೊಲವೆ ಬಾವಿಯನ್ನು ತೆಗೆದು ಹೊಸದಾಗಿ ನಿರ್ಮಿಸಿರುವುದು ಯಾಕೆ ಎಂಬ ಬಗ್ಗೆ ಮುಂದಿನ ಸಭೆಯಲ್ಲಿ ಚರ್ಚಿಸಲು ಸಂಬಂಧಪಟ್ಟ ಅಧಿಕಾರಿಗಳನ್ನು ಸಭೇಗೆ ಹಾಜರಾಗಲು ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯ 4ನೇ ಅಡ್ಡ ರಸ್ತೆ ಹೆಚ್.ಎಂ.ಟಿ ಬ್ಲಾಕ್ ನಲ್ಲಿನ ಪಾರ್ಕ್ ಸ್ವಚ್ಛಗೊಳಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಹೆಬ್ಬಾಳ ವಿಭಾಗ ರವರಿಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯ 7ನೇ ಅಡ್ಡ ರಸ್ತೆ ಪಿಲ್ಲಪ್ಪ ಬ್ಲಾಕ್ ವಿದ್ಯುತ್ ತಂತಿಗಳ ಮೇಲೆ ಮರದ ಕೊಂಬೆಗಳು ಚಾಚಿಕೊಂಡಿರುವುದನ್ನು ತೆರವುಗೊಳಸಲು ವಿದ್ಯುತ್ ವಿಭಾಗಕ್ಕೆ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಕೂಲಂಕುಶವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 20-ಗಂಗಾನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 20-ಗಂಗಾನಗರ

ಪ್ರತಿಯನ್ನು:-

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.